## ಕರ್ನಾಟಕ ಸರ್ಕಾರದ ನಡುವಳಿಗಳು

ವಿಷಯ: ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಆಡಳಿತ ಮತ್ತು ನಿರ್ವಹಣೆಯನ್ನು ಜಿಲ್ಲಾ ಪಂಚಾಯತ್ ಆಡಳಿತ ವ್ಯಾಪ್ತಿಯಿಂದ ಹಿಂತೆಗೆದುಕೊಂಡು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ [illegible] ವಹಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 209 ತಾಪಸ 2003, ದಿನಾಂಕ:05.10.2004
2. ಸರ್ಕಾರದ ಆದೇಶ ಸಂಖ್ಯೆ: ಸಕಇ 461 ಪಕವಿ 2004, ದಿನಾಂಕ:20.11.2004
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಏಕರೂಪ ಕಡತ ಸಂ:ಕವಶಿಸಸ/ಆಡಳಿತ-1/ಸಿಆರ್-1/56/2010-11, ದಿನಾಂಕ 08-09-2010.

* * * * * * * * * *

**ಪ್ರಸ್ತಾವನೆ:**

ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವರ್ಗಗಳ ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಪ್ರಾರಂಭ ಮಾಡಿದೆ. ಸದರಿ ಶಾಲೆಗಳನ್ನು ಈ ಹಿಂದೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ತಾ॥1.4.2005 ರವರೆಗೆ ಅವುಗಳ ಆಡಳಿತನಿರ್ವಹಣೆಯನ್ನು ನಿರ್ವಹಿಸುತ್ತಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರಿ ಆದೇಶದಂತೆ, ಈ ವಸತಿ ಶಾಲೆಗಳ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಪಂಚಾಯತ್‌ರಾಜ್ ಸಂಸ್ಥೆಗಳಿಗೆ ವಹಿಸಿ ಜಿಲ್ಲಾಪಂಚಾಯತ್‌ಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಸರ್ಕಾರಿ ಆದೇಶದಂತೆ, ಈ ಎಲ್ಲಾ ವಸತಿ ಶಾಲೆಗಳಿಗೆ ಜಿಲ್ಲಾ ವಲಯದಲ್ಲಿ ಸೂಕ್ತ ಅನುದಾನ ನಿಗಧಿಪಡಿಸಿಕೊಂಡು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ನಿರ್ವಹಣೆ ಮಾಡಲಾಗುತ್ತಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಏಕರೂಪ ಕಡತದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರು ಪ್ರಸ್ತಾವನೆ ಸಲ್ಲಿಸಿ, ಈಗ ರಾಜ್ಯದಲ್ಲಿ 398 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಹಾಗೂ 2009-10 ರಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಹೆಣ್ಣುಮಕ್ಕಳಿಗೆ ಪ್ರಾರಂಭಿಸಿದ 114 ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳು ಸಹ ಜಿಲ್ಲಾ ಪಂಚಾಯತ್ ಆಡಳಿತ ವ್ಯಾಪ್ತಿಯಲ್ಲೇ ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆಗಳು ಉದ್ದೇಶಿತ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಇದಕ್ಕೆ ಕೆಲವು ಕಾರಣಗಳನ್ನು ನೀಡಿ, ಈ ವಸತಿ ಶಾಲೆಗಳು ವಿವಿಧ ಜಿಲ್ಲಾ ಪಂಚಾಯತ್‌ಗಳ ವ್ಯಾಪ್ತಿಯಲ್ಲಿದ್ದು ಏಕರೂಪವಾದ ಅನುದಾನ, ಆಡಳಿತ ನಿರ್ವಹಣೆ ಮತ್ತು ಶೈಕ್ಷಣಿಕ ಗುಣಮಟ್ಟವನ್ನು ನಿರ್ಧರಿಸಲು ಸಾಧ್ಯವಾಗಿಲ್ಲ ಎಂದು ತಿಳಿಸಿದ್ದಾರೆ. ಇದರಿಂದ ಮೂಲತ:ವಾಗಿ ಈ ಶಾಲೆಗಳ ನಿರ್ವಹಣೆಯನ್ನು ಜಿಲ್ಲಾ ಪಂಚಾಯತ್‌ಗೆ ವರ್ಗಾವಣೆ ಮಾಡಿದ ಉದ್ದೇಶ ನೆರವೇರಿರುವುದಿಲ್ಲ. ಈ ವಸತಿ ಶಾಲೆಗಳ ನಿರ್ವಹಣೆ ಸಮರ್ಪಕವಾಗಿ ನಡೆಯುತ್ತಿಲ್ಲವೆಂದು ತಿಳಿಸಿ, ಸದರಿ ವಸತಿ ಶಾಲೆಗಳನ್ನು ಕೇಂದ್ರ ಸರ್ಕಾರದ ಜವಹಾರ್ ನವೋದಯ ಮಾದರಿಯಲ್ಲಿ ನಿರ್ವಹಣೆ ಮಾಡಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯತ್ ಆಡಳಿತ ವ್ಯಾಪ್ತಿಯಿಂದ ಹೊರತುಪಡಿಸಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ವಹಿಸಲು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ: ಸಕಇ 137 ಮೋದೇಶಾ 2010 ಬೆಂಗಳೂರು ದಿನಾಂಕ: 3.12.2010

1. ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಆಡಳಿತ ಮತ್ತು ನಿರ್ವಹಣೆಯನ್ನು ಜಿಲ್ಲಾಪಂಚಾಯತ್ ವ್ಯಾಪ್ತಿಯಿಂದ ಹಿಂತೆಗೆದುಕೊಂಡು ಮುಂದಿನ 2011-12ರ ಆರ್ಥಿಕ ವರ್ಷದಿಂದ ಶಾಲೆಗಳ ಆಡಳಿತ ಮತ್ತು ನಿರ್ವಹಣೆಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ವರ್ಗಾಯಿಸಲು ಆದೇಶಿಸಿದೆ.

2. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇದರ ವತಿಯಿಂದ ಈ ವಸತಿ ಶಾಲೆಗಳನ್ನು 2011-12 ಆರ್ಥಿಕ ವರ್ಷದಿಂದ ನಿರ್ವಹಣೆ ಮಾಡಲು ಸೂಕ್ತ ವ್ಯವಸ್ಥೆ ಮಾಡಿಕೊಳ್ಳಲು ಮತ್ತು ರಾಜ್ಯವಲಯದ ಲೆಕ್ಕ ಶೀರ್ಷಿಕೆಯಡಿಯಲ್ಲಿ ಸೂಕ್ತ ಅನುದಾನವನ್ನು ಒದಗಿಸಿಕೊಳ್ಳಲು ಆದೇಶಿಸಲಾಗಿದೆ.

ಈ ಆದೇಶವನ್ನು ಗ್ರಾಮೀಣ ಅಭಿವೃದ್ಧಿ ಪಂಚಾಯತ್‌ರಾಜ್ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:1691, ದಿನಾಂಕ:26.10.2010ರಲ್ಲಿ ನೀಡಿರುವ ಸಹಮತಿ ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 659 Exp.3/10, ದಿನಾಂಕ:09.10.2010ರಲ್ಲಿ ನೀಡಿರುವ ಸಹಮತಿ ಹಾಗೂ ದಿನಾಂಕ:18.11.2010 ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯದಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟೆ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು(ಎ ಮತ್ತು ಬಿ) ಕರ್ನಾಟಕ ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು(ಸಚಿವ ಸಂಪುಟ), ವಿಧಾನ ಸೌಧ,ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ,ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು
6. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು
7. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ)
8. ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ-3&9),ವಿಧಾನ ಸೌಧ,ಬೆಂಗಳೂರು.
9. ಅಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು
10. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
11. ನಿರ್ದೇಶಕರು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು
12. ಕಾರ್ಯನಿರ್ವಾಹಕ ನಿರ್ದೇಶಕರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು
13. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ/ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ (ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಮುಖಾಂತರ)
14. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನ ಸೌಧ,ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ,
16. ಸರ್ಕಾರದ ಅಧೀನ ಕಾರ್ಯದರ್ಶಿಗಳು 1 ಮತ್ತು 2, ಸ.ಕ.ಇ. ವಿಕಾಸ ಸೌಧ,ಬೆಂಗಳೂರು.
17. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ